# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1346

ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 24-12-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ರೈತ ಸಿರಿಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ರೈತಸಿರಿ ಯೋಜನೆಯನ್ನು 2019-20 ನೇ ಸಾಲಿನಿಂದ ಪ್ರಾರಂಭಿಸಲಾಗಿದ್ದು, 2019-20 ನೇ ಸಾಲಿನಲ್ಲಿ 49702 ಹಾಗೂ 2020-21ನೇ ಸಾಲಿನಲ್ಲಿ 10331 ರೈತರಿಗೆ ಪ್ರೋತ್ಸಾಹಧನ ವಿತರಿಸಲಾಗಿದೆ. ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ) | ರೈತಸಿರಿ ಯೋಜನೆಯ ಅನ್ವಯ ಯಾವ ಯಾವ ಬೆಳೆಗಳನ್ನು ಬೆಳೆಯಲಾಗುತ್ತದೆ; (ಕಳೆದ 3 ವರ್ಷಗಳ ವಿವರ ನೀಡುವುದು) | ರೈತಸಿರಿ ಯೋಜನೆಯಡಿ ಸಿರಿಧಾನ್ಯಗಳಾದ ಊದಲು, ನವಣೆ, ಹಾರಕ, ಕೊರಲೆ, ಸಾಮೆ ಮತ್ತು ಬರಗು ಬೆಳೆಗಳಿಗೆ ಉತ್ತೇಜನ ನೀಡಲಾಗುತ್ತಿದೆ. |
| ಇ) | ರೈತ ಸಂಪರ್ಕ ಕೇಂದ್ರಗಳ ಮುಖಾಂತರ ಕಳೆದ 3 ವರ್ಷಗಳಲ್ಲಿ ಎಷ್ಟು ಬಗೆಯ ಪಾಲಿಮರ್ ಲೇಪಿತ ಬೀಜಗಳನ್ನು ರೈತರಿಗೆ ಒದಗಿಸಲಾಗಿದೆ; ಇದರ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರೈತ ಸಂಪರ್ಕ ಕೇಂದ್ರಗಳ ಮುಖಾಂತರ ಕಳೆದ 3 ವರ್ಷಗಳಲ್ಲಿ ಯಾವುದೇ ಬಗೆಯ ಪಾಲಿಮರ್ ಲೇಪಿತ ಬಿತ್ತನೆ ಬೀಜಗಳನ್ನು ರೈತರಿಗೆ ವಿತರಿಸಲಾಗಿರುವುದಿಲ್ಲ. |

<table>
<tr>
<td>ಈ)</td>
<td>ರೈತರ ಹೊಲದ ಮಣ್ಣು ಮತ್ತು ನೀರಿನ ಪರೀಕ್ಷೆಗಾಗಿರುವ ಸಂಚಾರಿ ಘಟಕಗಳು ಕಳೆದ 3 ವರ್ಷಗಳಲ್ಲಿ ಎಷ್ಟು ರೈತರ ಹೊಲದ ಮಣ್ಣು ಮತ್ತು ನೀರಿನ ಪರೀಕ್ಷೆ ನಡೆಸಿವೆ? (ಜಿಲ್ಲಾವಾರು ವಿವರ ನೀಡುವುದು)</td>
<td>ರಾಜ್ಯದಲ್ಲಿ ಕೃಷಿ ಇಲಾಖೆಯ ಅಧೀನದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಮಾತ್ರ ಸಂಚಾರಿ ಮಣ್ಣು ಪರೀಕ್ಷಾ ವಾಹನವಿದ್ದು, ಈ ಜಿಲ್ಲೆಯಲ್ಲಿ ಮಾತ್ರ ಕಾರ್ಯ ನಿರ್ವಹಿಸುತ್ತಿದೆ.<br>ಕಳೆದ 3 ವರ್ಷಗಳಲ್ಲಿ ಈ ವಾಹನದಿಂದ ರೈತರ ಹೊಲದ ಮಣ್ಣು ಮತ್ತು ನೀರಿನ ಪರೀಕ್ಷೆಗಳನ್ನು ಬೆಳಗಾವಿ ಜಿಲ್ಲೆಯಲ್ಲಿ ಈ ಕೆಳಕಂಡಂತೆ ನಡೆಸಲಾಗಿದೆ.
<table>
<tr><th>ಕ್ರ.ಸಂ</th><th>ವರ್ಷ</th><th>ಮಣ್ಣು ಮಾದರಿಗಳ ಸಂಖ್ಯೆ</th><th>ನೀರಿನ ಮಾದರಿಗಳ ಸಂಖ್ಯೆ</th></tr>
<tr><td>1</td><td>2018-19</td><td>980</td><td>20</td></tr>
<tr><td>2</td><td>2019-20</td><td>960</td><td>25</td></tr>
<tr><td>3</td><td>2020-21</td><td>1050</td><td>15</td></tr>
<tr><td></td><td>ಒಟ್ಟು</td><td>2990</td><td>60</td></tr>
</table>
</td>
</tr>
</table>

ಸಂಖ್ಯೆ:AGRI-AML/266/2021

(ಬಿ.ಸಿ. ಪಾಟೀಲ್)

ಕೃಷಿ ಸಚಿವರು